ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಬುಧವಾರ, ೧೯, ಆಗಸ್ಟ್, ೨೦೨೬ (ಶ್ರಾವಣ, ೨೮, ಶಕವರ್ಷ, ೧೯೪೮)<br>BENGALURU, WEDNESDAY, 19, AUGUST, 2026 ( SHRAVANA , 28, SHAKAVARSHA, 1948) | ನಂ. ೭೪೪<br>No. 744 |
|---|---|---|

## ಕರ್ನಾಟಕ ಸರ್ಕಾರ

ಸಂಖ್ಯೆ:ನಅಇ 198 ಎಂಎಲ್‌ಆರ್ 2026

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, **ದಿನಾಂಕ: 19/08/2026.**

## ಅಧಿಸೂಚನೆ

ಚುನಾಯಿತ ಕೌನ್ಸಿಲ್ ಅವಧಿ ಮುಕ್ತಾಯಗೊಂಡ ರಾಜ್ಯದಲ್ಲಿನ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳ ದಿನನಿತ್ಯದ ಕಾರ್ಯ ನಿರ್ವಹಣೆಗಾಗಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಆಡಳಿತ ಹಿತದೃಷ್ಟಿಯಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 287 ಎಂಎಲ್‌ಆರ್ 2025; ದಿನಾಂಕ: 19.11.2025 ರಲ್ಲಿ ವಿವಿಧ ದಿನಾಂಕಗಳಿಂದ ಜಾರಿಗೆ ಬರುವಂತೆ ಆಡಳಿತಾಧಿಕಾರಿಗಳನ್ನು ನೇಮಿಸಿ ಆದೇಶಿಸಲಾಗಿತ್ತು. ಸದರಿ ಅಧಿಸೂಚನೆಯ ಪುರಸಭೆಗಳ ಪಟ್ಟಿಯಲ್ಲಿನ ಕ್ರಮ ಸಂಖ್ಯೆ: 35 ರಲ್ಲಿ ಹಾಸನ ಜಿಲ್ಲೆಯ ಹೊಳೇನರಸೀಪುರ ಪುರಸಭೆಗೆ ಆಡಳಿತಾಧಿಕಾರಿಯಾಗಿ ನೇಮಕಗೊಂಡ ಉಪವಿಭಾಗಾಧಿಕಾರಿ, ಹಾಸನ ಉಪವಿಭಾಗ ಇವರು ಹಲವಾರು ಹುದ್ದೆಗಳಲ್ಲಿ ಹೆಚ್ಚಿನ ಪ್ರಭಾರದಲ್ಲಿರುವುದರಿಂದ ತಕ್ಷಣದಿಂದ ಜಾರಿಗೆ ಬರುವಂತೆ ಇವರನ್ನು ಬದಲಾಯಿಸಿ ಕರ್ನಾಟಕ ಪೌರಸಭೆಗಳ ಕಾಯ್ದೆ, 1964ರ ಕಲಂ 389 ರಲ್ಲಿ ಪ್ರದತ್ತವಾಗಿರುವ ಅಧಿಕಾರದನ್ವಯ ವಿಶೇಷ ಭೂಸ್ವಾಧೀನಾಧಿಕಾರಿಗಳು, ಎತ್ತಿನಹೊಳೆ, ಹಾಸನ ಇವರನ್ನು ಅದೇ ಕಾಯ್ದೆಯ ಕಲಂ 42(5) ರನ್ವಯ ಹೊಳೇನರಸೀಪುರ ಪುರಸಭೆಯ ಆಡಳಿತಾಧಿಕಾರಿಯನ್ನಾಗಿ ಮುಂದಿನ ಆದೇಶದವರೆಗೆ ನೇಮಕ ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಮಂಜುನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಎಂಎ-1&3)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



P S BASAVARAJU